# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570 005.

ವಿಷಯ: 2014-15ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆಯ ಸಂಬಂಧ ದಿನಾಂಕ 20-06-2014ರಂದು ನಡೆದ ಸಭೆಯ ನಡಾವಳಿ.
2. ವಿಶ್ವವಿದ್ಯಾನಿಲಯದ ಆದೇಶ ಸಂಖ್ಯೆ: ಇಟಿ.11/152/2013-14 ದಿನಾಂಕ 24-06-2014.

--

## ಆದೇಶ ಸಂಖ್ಯೆ: ಇಟಿ11/175/2013-14 ದಿನಾಂಕ 22ನೇ ಆಗಸ್ಟ್ 2014

ದಿನಾಂಕ 20-06-2014ರಂದು ನಡೆದ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆ ಸಮಿತಿ ಸಭೆಯ ನಿರ್ಣಯ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2014-15ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| ಶ್ರೀಮತಿ ರೇಖಾ ಅಗರವಾಲ್ # 9, ಟೈಪ್-2, ಬ್ಲಾಕ್-2, ಸಿಪಿಡಬ್ಲ್ಯೂಡಿ ಕಾಂಪ್ಲೆಕ್ಸ್, ಜ್ಯೋತಿನಗರ, ಮೈಸೂರು-19. | ಹಿಂದಿ | 12 | ಹಿಂದಿ ಅಧ್ಯಯನ ವಿಭಾಗ, ಮಾಗಂ, ಮೈಸೂರು | 22,500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ನೀಡಿದ 7 ದಿನಗಳೊಳಗೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

**ಮುಚ್ಚಳಿಕೆ**

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2014–15ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.

2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012–13ನೇ ಪಾವಿ–1, ದಿನಾಂಕ 02–07–2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧನಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ

**ಕುಲಸಚಿವರಿಂದ ಕರಡು ಅನುಮೋದಿಸಿಡೆ.**

ಕುಲಸಚಿವ

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರುಗಳಿಗೆ – ಅಧ್ಯಕ್ಷರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರ ಮುಖಾಂತರ.
2. ಅಧ್ಯಕ್ಷರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಸರ್ಕಾರಿ ಲೆಕ್ಕ ಪರಿಶೋಧಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಯವರು, ಮಾನಸಗಂಗೋತ್ರಿ, ಮೈಸೂರು.
7. ಉಪಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು.
8. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪ) ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಕಛೇರಿ ಪ್ರತಿ. GF 12 hrs